**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 26–11–2021**

## ಮಾಧ್ಯಮ ಸಂಸ್ಥೆಗಳ ಗಮನಕ್ಕೆ

ಡಿಸೆಂಬರ್ 13 ರಿಂದ ಡಿಸೆಂಬರ್ 24 ರ ವರೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯಲಿರುವ ರಾಜ್ಯ ವಿಧಾನ ಮಂಡಲದ ಚಳಿಗಾಲದ ಅಧಿವೇಶನದ ವರದಿಗಾಗಿ ತಮ್ಮ ಮಾಧ್ಯಮ ಸಂಸ್ಥೆಯಿಂದ ನಿಯೋಜಿಸಲಾಗುವ ವರದಿಗಾರರು ಹಾಗೂ ಛಾಯಾಗ್ರಾಹಕರ ವಿವರಗಳನ್ನು ಡಿಸೆಂಬರ್ 1 ರ ಸಂಜೆ 5:00 ಗಂಟೆಯೊಳಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ಸಲ್ಲಿಸಲು ಕೋರಿದೆ.

| ಕ್ರಸಂ | ಹೆಸರು/ಪದನಾಮ | ಸಂಪರ್ಕ ಸಂಖ್ಯೆ | ಮಾಧ್ಯಮ ಸಂಸ್ಥೆ ಹೆಸರು/ವಿಳಾಸ/ದೂರವಾಣಿ | ಮನೆ ವಿಳಾಸ/ದೂರವಾಣಿ |
|---|---|---|---|---|
| | | | | |

ನಿಗಧಿತ ಸಮಯದಲ್ಲಿ ತಾವುಗಳು ವಿವರಗಳನ್ನು ನೀಡಿದಲ್ಲಿ ವಸತಿ ಸೌಲಭ್ಯ ಒದಗಿಸಲು ಅನುಕೂಲವಾಗಲಿದೆ, ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ತುರ್ತು ಸಂದರ್ಭಗಳಲ್ಲಿ ಸಂಬಂಧಪಟ್ಟವರನ್ನು ಸಂಪರ್ಕಿಸಲು ಸಹಾಯವಾಗುವಂತೆ ನಿಗಧಿತ ನಮೂನೆಯಲ್ಲಿ ಕಡ್ಡಾಯವಾಗಿ ಮಾಧ್ಯಮ ಪ್ರತಿನಿಧಿಗಳ ಸಂಪೂರ್ಣ ವಿವರ ಒದಗಿಸುವಂತೆ ತಿಳಿಸಿದೆ.

ಆಯುಕ್ತರು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಗೆ,

ಬೆಂಗಳೂರಿನಲ್ಲಿ ಕೇಂದ್ರಿಕೃತವಾಗಿರುವ ರಾಜ್ಯ ಹಾಗೂ ರಾಷ್ಟ್ರಮಟ್ಟದ ಮುದ್ರಣ ಮಾಧ್ಯಮದ ದಿನ ಪತ್ರಿಕೆಗಳು ಹಾಗೂ ವಿದ್ಯುನ್ಮಾನ ಮಾಧ್ಯಮದ ಉಪಗ್ರಹ ಸುದ್ದಿ ವಾಹಿನಿಗಳ ಮುಖ್ಯಸ್ಥರುಗಳಿಗೆ.

**ಮಾಧ್ಯಮ ಆಹ್ವಾನ**

# Media Invitation

## 1. ಕರ್ನಾಟಕ ಜಾನಪದ ಪರಿಷತ್ತು ವತಿಯಿಂದ "ನಾಡೋಜ ಎಚ್.ಎಲ್.ನಾಗೇಗೌಡ ರಾಷ್ಟ್ರೀಯ ಪ್ರಶಸ್ತಿ" ಪ್ರದಾನ ಸಮಾರಂಭ:

ದಿವ್ಯ ಸಾನಿಧ್ಯ ಹಾಗೂ ಉದ್ಘಾಟನೆ
ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮಿಗಳು
ಪೀಠಾಧ್ಯಕ್ಷರು, ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಶ್ರೀಕ್ಷೇತ್ರ, ಆದಿಚುಂಚನಗಿರಿ, ಮಹಾಪೋಷಕರು, ಕರ್ನಾಟಕ ಜಾನಪದ ಪರಿಷತ್ತು.

**ಪ್ರಶಸ್ತಿ ಪ್ರದಾನ:**
ವಿ.ಸುನಿಲ್ ಕುಮಾರ್
ಮಾನ್ಯ ಇಂಧನ ಸಚಿವರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು

**ಮುಖ್ಯ ಅತಿಥಿಗಳು:**
ಡಾ. ಗೊ.ರು. ಚನ್ನಬಸಪ್ಪ
ಹಿರಿಯ ಜಾನಪದ ವಿದ್ವಾಂಸರು

ಡಾ. ಮಂಜುಳ. ಎನ್, ಐ.ಎ.ಎಸ್
ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು

ಎಸ್. ರಂಗಪ್ಪ ಎಫ್‌ಸಿಎ, ಕೆ.ಎ.ಎಸ್
ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು

**ಅಧ್ಯಕ್ಷತೆ:**
ಟಿ.ತಿಮ್ಮೇಗೌಡ ಐ.ಎ.ಎಸ್ (ನಿ)
ಅಧ್ಯಕ್ಷರು, ಕರ್ನಾಟಕ ಜಾನಪದ ಪರಿಷತ್ತು.

**ನಾಡೋಜ ಎಚ್.ಎಲ್.ನಾಗೇಗೌಡ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರು**
ಜನಾಬ್ ಮೊಹಮ್ಮದ್ ಸಲೀಂ ಹಸನ್ ಚಿಸ್ತಿ
ಜನಪದ ಸೂಫಿ ಗಾಯಕರು, ಉತ್ತರ ಪ್ರದೇಶ

ದಿನಾಂಕ : 27–11–2021, ಶನಿವಾರ,

ಸಮಯ : ಸಂಜೆ 5.00 ಗಂಟೆಗೆ

ಸ್ಥಳ : ರವೀಂದ್ರ ಕಲಾಕ್ಷೇತ್ರ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

**PRESS RELEASE**

### ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಪುಷ್ಪನಮನ

ಬೆಂಗಳೂರು, ನವೆಂಬರ್ 26 (ಕರ್ನಾಟಕ ವಾರ್ತೆ):

"ಸಂವಿಧಾನ ದಿವಸ" ಆಚರಣೆ ಅಂಗವಾಗಿ ವಿಧಾನಸೌಧದ ಮುಂಭಾಗದಲ್ಲಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ವಿಧಾನಪರಿಷತ್ ಸಭಾಪತಿಗಳಾದ ಬಸವರಾಜ ಎಸ್. ಹೊರಟ್ಟಿ ಹಾಗೂ ವಿಧಾನಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಮಾಲಾರ್ಪಣೆ ಮಾಡಿ, ಪುಷ್ಪ ನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಚಿವಾಲಯದ ಕಾರ್ಯದರ್ಶಿ ಶ್ರೀಮತಿ ಕೆ.ಆರ್. ಮಹಾಲಕ್ಷ್ಮಿ, ವಿಧಾನಸಭಾ ಸಚಿವಾಲಯದ ಕಾರ್ಯದರ್ಶಿ ಶ್ರೀಮತಿ ಎಂ.ಕೆ. ವಿಶಾಲಾಕ್ಷಿ ಹಾಗೂ ಉನ್ನತ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

### ನಮ್ಮ ಸಂವಿಧಾನ ಜಗತ್ತಿನಲ್ಲಿಯೇ ಅತ್ಯಂತ ದೊಡ್ಡ ಹಾಗೂ ಲಿಖಿತ ಸಂವಿಧಾನ – ಬಸವರಾಜ ಎಸ್. ಹೊರಟ್ಟಿ

ಬೆಂಗಳೂರು, ನವೆಂಬರ್ 26 (ಕರ್ನಾಟಕ ವಾರ್ತೆ):

ಜಗತ್ತಿನಲ್ಲಿಯೇ ಅತ್ಯಂತ ದೊಡ್ಡ ಹಾಗೂ ಲಿಖಿತ ಸಂವಿಧಾನ ನಮ್ಮದಾಗಿದ್ದು, ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರಿಂದ ರಚಿತವಾಗಿರುವ ನಮ್ಮ ಹೆಮ್ಮೆಯ ಸಂವಿಧಾನದಲ್ಲಿ ಎಲ್ಲಾ ಜಾತಿ, ಮತ, ಪಂಥ ಹಾಗೂ ವರ್ಗಗಳಿಗೆ ಸೇರಿದ ಜನರ ಹಿತವಿದೆ ಎಂದು ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಎಸ್. ಹೊರಟ್ಟಿ ಅವರು ತಿಳಿಸಿದರು.

ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ, "ಸಂವಿಧಾನ ದಿವಸ" ಆಚರಣೆ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತಾಡಿದ ಅವರು, 1949 ರ ನವೆಂಬರ್ 26 ರಂದು ಸಂವಿಧಾನವನ್ನು ಅಂಗೀಕರಿಸಿದ ದಿನವಾಗಿದ್ದು, ಸ್ವತಂತ್ರ ಭಾರತದ ಇತಿಹಾಸದಲ್ಲಿ ಇಂದಿನ ದಿನ ನಮ್ಮೆಲ್ಲರಿಗೂ ಅತ್ಯಂತ ಅವಿಸ್ಮರಣೀಯ. ಪ್ರತಿ ವರ್ಷ ನವೆಂಬರ್ 26 ರಂದು ಸಂವಿಧಾನ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದರು.

ದೇಶದ ಪ್ರಜಾಪ್ರಭುತ್ವದ ಭದ್ರ ಬುನಾದಿಯೇ ನಮ್ಮ ಸಂವಿಧಾನ ಎಂಬುದು ಅತ್ಯಂತ ಗೌರವ ಮತ್ತು ಹೆಮ್ಮೆಯ ಸಂಗತಿಯಾಗಿದೆ. ಹಲವು ವೈಶಿಷ್ಟ್ಯತೆಯನ್ನು ಹೊಂದಿರುವ ನಮ್ಮ ಸಂವಿಧಾನ ನಮ್ಮೆಲ್ಲಾ ನಾಗರೀಕರನ್ನು ಸಶಕ್ತಗೊಳಿಸಿ, ಸರ್ವರಿಗೂ ಸಮಾನತೆಯ ಅವಕಾಶ ನೀಡಿ, ಮೂಲಭೂತ ಹಕ್ಕು ಹಾಗೂ ಕರ್ತವ್ಯಗಳನ್ನು ನೀಡಿದೆ. ಇಂತಹ ಸಂವಿಧಾನದ ಮಹತ್ವದ ಬಗ್ಗೆ ದೇಶದ ಎಲ್ಲಾ ನಾಗರೀಕರಲ್ಲಿ ಅರಿವು ಮೂಡಿಸಿ ಸಂವಿಧಾನದ ಬಗ್ಗೆ ಗೌರವ ಮೂಡಿಸುವುದರ ಜೊತೆಗೆ

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಬಗ್ಗೆ ಜಾಗೃತಿ ಮೂಡಿಸುವುದು ಇಂದಿನ ಸಂವಿಧಾನ ದಿನಾಚರಣೆಯ ಮೂಲ ಉದ್ದೇಶವಾಗಿದೆ ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಅವರೇ ಹೇಳಿರುವಂತೆ " ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವವನ್ನು ಕಲಿಸುವ ಧರ್ಮವನ್ನು ನಾನು ಇಷ್ಟ ಪಡುತ್ತೇನೆ". "ನಾವೆಲ್ಲರೂ ನಮ್ಮ ಸ್ವಂತ ಬಲದಿಂದ ಗಟ್ಟಿಯಾಗಿ ನಿಲ್ಲಬೇಕು ಮತ್ತು ನಮ್ಮ ಹಕ್ಕುಗಳಿಗಾಗಿ ಹೋರಾಟ ಮಾಡಬೇಕು ಎಂದರು.

ಎಲ್ಲಾ ಧರ್ಮಗ್ರಂಥಗಳು ಆಯಾಯ ಧರ್ಮದ ಜನರು ಹೇಗೆ ಜೀವನ ಸಾಗಿಸಬೇಕು ಎಂದು ತಿಳಿಸಿದರೆ, ಭಾರತ ಸಂವಿಧಾನವು ಎಲ್ಲಾ ಧರ್ಮೀಯರು ಯಾವ ರೀತಿ ಅತ್ಯುತ್ತಮ ಜೀವನ ನಡೆಸಬೇಕು ಎಂಬುದನ್ನು ತಿಳಿಸುತ್ತದೆ. ಸಂವಿಧಾನವನ್ನು ಬೆರಳಚ್ಚು ಅಥವಾ ಮುದ್ರಣ ಮಾಡದೇ ಇಂಗ್ಲೀಷ್ ಮತ್ತು ಹಿಂದಿ ಭಾಷೆಯಲ್ಲಿ ಕೈ ಬರಹದ ರೂಪದಲ್ಲಿದೆ. ಸಂವಿಧಾನದ ಮೂಲ ಪ್ರತಿಗಳನ್ನು ವಿಶೇಷವಾಗಿ ಹೀಲಿಯಂ ತುಂಬಿದ ಕವಚಗಳಲ್ಲಿ ಸಂರಕ್ಷಿಸಲಾಗಿದ್ದು, ಅದನ್ನು ಭಾರತದ ಸಂಸತ್ ಭವನದ ಗ್ರಂಥಾಲಯದಲ್ಲಿ ಇರಿಸಲಾಗಿದೆ ಎಂದು ತಿಳಿಸಿದರು.

ಸಂವಿಧಾನವು 448 ವಿಧಿಗಳು 25 ಭಾಗಗಳು, 12 ಷೆಡ್ಯೂಲ್ 05 ಅನುಬಂಧಗಳು ಹಾಗೂ 98 ತಿದ್ದುಪಡಿಗಳನ್ನು ಒಳಗೊಂಡಿದೆ. ಶ್ರೇಷ್ಠ ಸಂವಿಧಾನ ಹೊಂದಿರುವ ನಾವೆಲ್ಲರೂ ಧನ್ಯತಾ ಭಾವದಿಂದ ಸಂವಿಧಾನದ ಮೂಲ ಆಶಯಗಳಿಗೆ ಅನುಗುಣವಾಗಿ ನಮ್ಮ ಬದುಕನ್ನು ಆದರ್ಶವಾಗಿರಿಸಿಕೊಂಡು ದೇಶದ ಉನ್ನತಿಗೆ ಶ್ರಮಿಸಬೇಕು ಎಂದು ಹೇಳಿದರು.

ಇಂದಿನ ಯುವಜನತೆಗೆ ನಮ್ಮ ಸಂವಿಧಾನದ ಶ್ರೇಷ್ಠತೆ ಮತ್ತು ಉದಾತ್ತತೆ ಕುರಿತು ಅರಿವು ಮೂಡಿಸಿ ದೇಶದ ಬಗ್ಗೆ ಭಕ್ತಿ ಹಾಗೂ ಗೌರವಗಳನ್ನು ಬೆಳೆಸಬೇಕಿದೆ. "ದೇಶ ಮೊದಲು" ಎಂಬ ಮನೋಭಾವನೆಯು ಪ್ರತಿಯೊಬ್ಬರಲ್ಲೂ ಜಾಗೃತಗೊಂಡು ದೇಶಕ್ಕಾಗಿ ಕೈಲಾದ ಮಟ್ಟಿಗೆ ಒಳ್ಳೆಯದನ್ನು ಮಾಡಬೇಕು ಎಂದರು.

ವಿಧಾನಸೌಧದ ಸಂದೇಶವು ಸಾರ್ವಜನಿಕರಿಗೆ ತಲುಪುವುದರಿಂದ ವಿಧಾನಮಂಡಲದ ಅಧಿಕಾರಿಗಳು-ನೌಕರರು ಸಾಮಾನ್ಯ ಜನರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕೆಲಸ ಮಾಡಿದರೆ ಸಂವಿಧಾನ ದಿನದ ಆಚರಣೆಯು ಸಾರ್ಥಕವಾಗುತ್ತದೆ ಎಂದರು.

ವಿಧಾನ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಮಾತನಾಡಿ, ಈ ಹಿಂದೆ ಸಂವಿಧಾನ ರಚನಾ ದಿನವನ್ನು "ರಾಷ್ಟ್ರೀಯ ಕಾನೂನು ದಿವಸ" ಎಂದು ಆಚರಿಸಲಾಗುತ್ತಿತ್ತು. ಕಳೆದ 2015ರ ಅಕ್ಟೋಬರ್ 11 ರಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಸ್ಮಾರಕಕ್ಕೆ ಮುಂಬೈನಲ್ಲಿ ಅಡಿಗಲ್ಲು ಹಾಕುವ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ನವೆಂಬರ್ 26 ರಂದು ಪ್ರತಿ ವರ್ಷ ಸಂವಿಧಾನ ದಿವಸವನ್ನಾಗಿ ಆಚರಿಸಲು ಘೋಷಣೆ ಮಾಡಿದರು. ಈ ಹಿನ್ನೆಲೆಯಲ್ಲಿ ನಾಡಿನ ಉದ್ದಗಲಕ್ಕೂ ಇದರ ಆಚರಣೆ ಮಾಡುತ್ತಿದ್ದು, ಜನರಿಗೆ ಸಂವಿಧಾನದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದರು.

ಡಾ:ಬಿ.ಆರ್.ಅಂಬೇಡ್ಕರ್ ಅವರು ಸುದೀರ್ಘ ಕಾಲ ಚರ್ಚಿಸಿ, ಅಭಿಪ್ರಾಯಗಳನ್ನು ಸಂಗ್ರಹಿಸಿ, ಅವರ ಬಾಲ್ಯದ ಅನುಭವಗಳಿಂದ ಜಗತ್ತು ಮೆಚ್ಚುವಂತೆ ಅತ್ಯಂತ ಶ್ರೇಷ್ಠ ಸಂವಿಧಾನ ರಚನೆ ಮಾಡಿದ್ದಾರೆ. ಶಾಸಕಾಂಗದವರು ಸಂವಿಧಾನದ ಅನುಷ್ಠಾನ ಮತ್ತು ಪರಿಣಾಮದ ಆತ್ಮಾವಲೋಕನ ಮಾಡಿಕೊಂಡು ಜನರ ಹಿತಕ್ಕಾಗಿ ಕರ್ತವ್ಯ ನಿರ್ವಹಿಸುವುದರೊಂದಿಗೆ ಸಂವಿಧಾನದ ಆಶಯವನ್ನು ಈಡೇರಿಸಬೇಕು ಎಂದರು.

ಇಂದಿನ ಯುವ ಪೀಳಿಗೆಗೆ ಸ್ವಾತಂತ್ರ್ಯ ಹೋರಾಟದ ನೆನಪು ಹಚ್ಚ ಹಸಿರಾಗಿರಬೇಕು. ನಮಗೆ ಸ್ವಾತಂತ್ರ್ಯ ಸರಳವಾಗಿ ಸಿಕ್ಕಿಲ್ಲ, ಅನೇಕ ಹಿರಿಯರ ತ್ಯಾಗ ಬಲಿದಾನದಿಂದ ಸ್ವಾತಂತ್ರ್ಯ ದೊರೆತಿದ್ದು, ಅವರ ಕೊಡುಗೆಯನ್ನು ಸ್ಮರಿಸಬೇಕು ಎಂದರು. ಇದೇ ಸಂದರ್ಭದಲ್ಲಿ ಸಂವಿಧಾನ ಪ್ರಸ್ತಾವನೆಯನ್ನು ವಾಚಿಸಿದರು.

ಗೃಹಸಚಿವ ಆರಗ ಜ್ಞಾನೇಂದ್ರ ಅವರು ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಇತಿಹಾಸದಲ್ಲೇ ಪ್ರಥಮ ಬಾರಿಗೆ ರಾಜ್ಯದ ವಿಧಾನಸಭೆಯಲ್ಲಿ ಸಂವಿಧಾನ ಕುರಿತು ಚರ್ಚಿಸಿದ ಸಂದರ್ಭದಲ್ಲಿ ಶಾಸಕಾಂಗದಲ್ಲಿ ಕೆಲಸ ಮಾಡುವವರಿಗೆ ಸಂವಿಧಾನದ ಬಗ್ಗೆ ಪರಿಕಲ್ಪನೆ ಇರಬೇಕು ಎಂಬುದರ ಬಗ್ಗೆ ಅರಿವು ಮೂಡಿಸಿದುದು ಸ್ಮರಣೀಯ. ಇದಕ್ಕಾಗಿ ಸಭಾಪತಿ ಮತ್ತು ಸಭಾಧ್ಯಕ್ಷರಿಗೆ ಎಲ್ಲರೂ ಅಭಿನಂದನೆ ಸಲ್ಲಿಸಬೇಕು. ಪ್ರತಿಯೊಬ್ಬ ಪ್ರಜೆಗೂ ಸಂವಿಧಾನದ ಬಗ್ಗೆ ಅರಿವು ಮೂಡಿಸಲು ಸಾರ್ವತ್ರಿಕವಾಗಿ ಸಂವಿಧಾನ ದಿನ ಆಚರಿಸಲಾಗುತ್ತಿದೆ ಎಂದರು.

ನಿವೃತ್ತ ನ್ಯಾಯಮೂರ್ತಿಗಳಾದ ಸುಭಾಷ್ ಆಡಿ ಅವರು ಮಾತನಾಡಿ, ಸಂವಿಧಾನದಲ್ಲಿ ನ್ಯಾಯಾಂಗ, ಕಾರ್ಯಾಂಗ, ಶಾಸಕಾಂಗ ಪ್ರಮುಖ ಅಂಗಗಳಾಗಿವೆ. ತಪ್ಪು ಮಾಡಿದಾಗ ಎಚ್ಚರಿಸುವ ಕೆಲಸವನ್ನು ಪತ್ರಿಕಾ ರಂಗವು ನಾಲ್ಕನೇ ರಂಗವಾಗಿಮಾಡುತ್ತಿದೆ. ಪ್ರತಿಯೊಬ್ಬ ನಾಗರೀಕರು ಅದರಲ್ಲೂ ಮುಖ್ಯವಾಗಿ ಸರ್ಕಾರಿ ಕೆಲಸ ಮಾಡುವ ಅಧಿಕಾರಿಗಳು ಮೂಲಭೂತ ಹಕ್ಕು ಮತ್ತು ಜನಪರ ಕಾರ್ಯಗಳನ್ನು ಜನಸಾಮಾನ್ಯರಿಗೆ ತಲುಪುವಂತೆ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನಸಭಾ ಮತ್ತು ವಿಧಾನ ಪರಿಷತ್ ಸಚಿವಾಲಯದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು. ವಿಧಾನಸಭಾ ಸಚಿವಾಲಯದ ಕಾರ್ಯದರ್ಶಿಗಳಾದ ಶ್ರೀಮತಿ ಕೆ.ಎಂ.ವಿಶಾಲಾಕ್ಷಿ ಸ್ವಾಗತಿಸಿದರು. ವಿಧಾನ ಪರಿಷತ್ ಸಚಿವಾಲಯದ ಕಾರ್ಯದರ್ಶಿಗಳಾದ ಕೆ.ಆರ್. ಮಹಾಲಕ್ಷ್ಮಿ ಅವರು ವಂದಿಸಿದರು.

## ಸರ್ಕಾರದ ಮುಖ್ಯಕಾರ್ಯದರ್ಶಿ ಪಿ. ರವಿಕುಮಾರ್ ಅವರಿಂದ ಪ್ರತಿಜ್ಞಾವಿಧಿ ಬೋಧನೆ

ಬೆಂಗಳೂರು, ನವೆಂಬರ್ 26 (ಕರ್ನಾಟಕ ವಾರ್ತೆ):

ಭಾರತದ ಸಂವಿಧಾನದ ದಿವಸದ ಅಂಗವಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಡೆದ ಸರಳ ಕಾರ್ಯಕ್ರಮದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಪಿ.ರವಿಕುಮಾರ್ ಅವರು ಭಾರತದ ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಅಮಿತಾ ಪ್ರಸಾದ್, ವಂದಿತಾ ಶರ್ಮಾ, ರಾಜೀವ್ ಚಾವ್ಲಾ, ಐ.ಎನ್.ಎಸ್. ಪ್ರಸಾದ್, ರಜನೀಶ್ ಗೋಯಲ್, ಕಲ್ಪನಾ, ಶಾಲಿನಿ ರಜನೀಶ್ ಹಾಗೂ ಸರ್ಕಾರದ ಕಾರ್ಯದರ್ಶಿಗಳಾದ ತುಷಾರ್ ಗಿರಿನಾಥ್, ಸೆಲ್ವಕುಮಾರ್, ಹೇಮಲತಾ ಮತ್ತು ಸಚಿವಾಲಯದ ಉನ್ನತ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಕರ್ನಾಟಕ ಮುಕ್ತ ಶಾಲೆ– ಕೆ.ಓ.ಎಸ್ ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟ

ಬೆಂಗಳೂರು, ನವೆಂಬರ್ 26 (ಕರ್ನಾಟಕ ವಾರ್ತೆ):

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಅಕ್ಟೋಬರ್ –2021ರ ಮಾಹೆಯಲ್ಲಿ ನಡೆಸಿದ ಕರ್ನಾಟಕ ಮುಕ್ತ ಶಾಲೆ– ಕೆ.ಓ.ಎಸ್ ಪೂರಕ ಪರೀಕ್ಷೆಯ ಫಲಿತಾಂಶವನ್ನು ನವೆಂಬರ್ 26 ರಂದು ಅಪರಾಹ್ನ 3 ಗಂಟೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ವೆಬ್‌ಸೈಟ್ https://sslc.karnataka.gov.in ನಲ್ಲಿ ಪ್ರಕಟಿಸಲಾಗಿದೆ.

ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಕಲಿಕಾ ಕೇಂದ್ರಗಳ ಲಾಗಿನ್‌ನಲ್ಲಿ ಲಭ್ಯ ಮಾಡಲಾಗುವುದು. ಕರ್ನಾಟಕ ಮುಕ್ತ ಶಾಲೆ – ಕೆ.ಓ.ಎಸ್ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳು ನವೆಂಬರ್ 27 ರಂದು ಫಲಿತಾಂಶವನ್ನು ಆಯಾ ಕಲಿಕಾ ಕೇಂದ್ರಗಳಲ್ಲಿ ಪ್ರಕಟಿಸುವಂತೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ನಿರ್ದೇಶಕರು (ಇತರೆ ಪರೀಕ್ಷೆಗಳು) ಅವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 4 ವರ್ಷಗಳ ಬಿಎ/ಬಿಎಸ್ಸಿ ಆನರ್ಸ್ ಕೋರ್ಸ್ ಗಳನ್ನು ದೇಶದಲ್ಲೇ ಪ್ರಥಮವಾಗಿ ಆರಂಭ

ಬೆಂಗಳೂರು, ನವೆಂಬರ್ 26 (ಕರ್ನಾಟಕ ವಾರ್ತೆ):

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ 4 ವರ್ಷಗಳ ಬಿಎ/ಬಿಎಸ್ಸಿ ಆನರ್ಸ್ ಕೋರ್ಸ್ ಗಳನ್ನು ದೇಶದಲ್ಲೇ ಪ್ರಥಮವಾಗಿ, ವಿಶ್ವವಿದ್ಯಾಲಯ ಕ್ಯಾಂಪಸ್‌ನಲ್ಲಿ ಆರಂಭಿಸಿದ್ದೇವೆ ಎಂದು ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಕೆ.ಆರ್.ವೇಣುಗೋಪಾಲ್ ತಿಳಿಸಿದರು.

ಅವರು ಇಂದು ಬಿ.ಎ. ಮತ್ತು ಬಿ.ಎಸ್ಸಿ ಹಾನರ್ಸ್ ಮತ್ತು ಬಿಎಸ್ಸಿ- ಹಾನರ್ಸ್- ಎಂಎಸ್ಸಿ ಇಂಟೆಗ್ರೇಟೆಡ್ ಬಯೋಲಾಜಿಕಲ್ ಸೈನ್ಸ್ ಕೋರ್ಸ್‌ಗಳು. ಬಿಎ ಮತ್ತು ಬಿಎಸ್ಸಿ ಗೌರವ (ಇತಿಹಾಸ ಮ್ಯೂಸಿಯಂ) ಕಟ್ಟಡ, ಇಲ್ಲಿ ದೀಪ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಅವರು, ವಿದ್ಯಾರ್ಥಿಗಳು, ಪಾಲಕರು ಹಾಗೂ ಕೋರ್ಸುಗಳ ಕುರಿತು ಮಾತನಾಡಿದರು.

ಪ್ರಸ್ತುತ ಸನ್ನಿವೇಶದಲ್ಲಿ ಅಗತ್ಯ ಆಧಾರಿತ ಶಿಕ್ಷಣದ ಮಹತ್ವದ ಕುರಿತು ಮಾತನಾಡಿದರು. ಆ ರೀತಿಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ 2020) ಅಡಿಯಲ್ಲಿ ಈ ಕೋರ್ಸ್‌ಗಳು ಬಹಳ ಉದ್ದೇಶವನ್ನು ಹೊಂದಿರುತ್ತವೆ. ಮಾತೃಭಾಷೆಯಲ್ಲಿ ಶಿಕ್ಷಣವು ನಿರ್ಣಾಯಕವಾಗಿದೆ ಎಂದು ಅವರು ಉಲ್ಲೇಖಿಸಿದರು. ಪ್ರಾಚೀನ ಭಾರತದ ಶಿಕ್ಷಣವು ಪ್ರಪಂಚದಲ್ಲಿ ಅತ್ಯುತ್ತಮವಾಗಿದೆ ಮತ್ತು ಭಾರತದಲ್ಲಿ ಮೊದಲ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಯಿತು.

ಪ್ರಪಂಚದ ಜಿಡಿಪಿಯ ಸುಮಾರು 34% ಭಾರತದಿಂದ ಬಂದಿತ್ತು. ನಂತರ. ಆಕ್ರಮಣಕಾರರು ಸಂಪತ್ತು ಕೇಂದ್ರಗಳ ಮೊದಲು ಜ್ಞಾನ ಕೇಂದ್ರಗಳ ಮೇಲೆ ದಾಳಿ ಮಾಡಿದರು ಮತ್ತು ಭಾರತೀಯರನ್ನು ಗುಲಾಮರನ್ನಾಗಿ ಮಾಡಲಾಯಿತು. ಅವರು ಉತ್ತಮ ಅಭ್ಯಾಸಗಳನ್ನು ಇಟ್ಟುಕೊಳ್ಳುವಂತೆ ವಿದ್ಯಾರ್ಥಿಗಳಿಗೆ ತಿಳಿಸಿದರು ಮತ್ತು ಅಭ್ಯಾಸವು ಮನುಷ್ಯನನ್ನು ಪರಿಪೂರ್ಣವಾಗಿಸುತ್ತದೆ ಎಂದು ಉಲ್ಲೇಖಿಸಿದರು. ಎಂದಿಗೂ ಹತಾಶರಾಗಬೇಡಿ ಎಂದು ಹೇಳಿದರು. ನೀವು ಪರಿಶ್ರಮ ಮತ್ತು ಶಿಸ್ತಿಂದ ಕೆಲಸ ಮಾಡಿದರೆ, ನೀವು ಯಾವುದೇ ಎತ್ತರವನ್ನು ತಲುಪಬಹುದು ಎಂದು ತಿಳಿಸಿದರು.

ಇವು ಬಹು ನಿರ್ಗಮನ ಆಯ್ಕೆಗಳನ್ನು ಹೊಂದಿರುವ ಕೋರ್ಸ್‌ಗಳಾಗಿವೆ. ಈ ಕೋರ್ಸ್ ಗಳನ್ನು ಕೌಶಲ್ಯ ಆಧಾರಿತ, ಆಯ್ಕೆ ಆಧಾರಿತ ಮತ್ತು ಬಹು-ಶಿಸ್ತಿನ ಸ್ವಭಾವವಾಗಿವೆ. ಇದು ವಿದ್ಯಾರ್ಥಿಗಳಿಗೆ ಎಲ್ಲಾ ಸುತ್ತಿನ ಸಾಮರ್ಥ್ಯಗಳನ್ನು ಮತ್ತು ಪ್ರಪಂಚದಾದ್ಯಂತ ಹೆಚ್ಚಿನ ಉದ್ಯೋಗವನ್ನು ಒದಗಿಸುತ್ತವೆ. ಈ ಕೋರ್ಸ್‌ಗಳನ್ನು ಉತ್ತಮ ಅರ್ಹ ಮತ್ತು ಅನುಭವಿ ಅಧ್ಯಾಪಕರು ಕಲಿಸುತ್ತಾರೆ.ವಿಸ್ಮಯಕಾರಿ ಬಯೋ ಪಾರ್ಕ್ ಪರಿಸರ ಸೇರಿದಂತೆ ಸಂಪೂರ್ಣ ಹಸಿರಿನಿಂದ ಕೂಡಿದ ಅದ್ಭುತ ಪ್ರಕೃತಿಯ ನಡುವೆ ವಿದ್ಯಾರ್ಥಿಗಳು ಬೃಹತ್ ಕ್ಯಾಂಪಸ್ ನಲ್ಲಿ ಅಧ್ಯಯನ ಮಾಡಲು ಅವಕಾಶವನ್ನು ಪಡೆಯುತ್ತಾರೆ.

ಕಾರ್ಯಕ್ರಮದಲ್ಲಿ ಕೋರ್ಸ್‌ನ ಸಂಯೋಜಕರಾದ ಪ್ರೊ.ಕೇಶವ, ಪ್ರೊ.ಕೃಷ್ಣಮೂರ್ತಿ ಜಿ, ಪ್ರೊ.ಶಿವಶಂಕರ್, ಪ್ರೊ.ಸರಬರಿ ಬಾಟ್ಟಾಚಾರ್ಯ ಮತ್ತು ಪ್ರೊ.ಸುರೇಂದ್ರ ಕುಮಾರ್ ಉಪಸ್ಥಿತರಿದ್ದರು.

## ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ ವಕ್ಫ್ ಸಚಿವರು ಹಾಗೂ ವಕ್ಫ್ ಮಂಡಳಿಯ ಅಧ್ಯಕ್ಷರು

ಬೆಂಗಳೂರು, ನವೆಂಬರ್ 26 (ಕರ್ನಾಟಕ ವಾರ್ತೆ):

ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರಾದ ಶಶಿಕಲಾ ಜೊಲ್ಲೆ ಸಮ್ಮುಖದಲ್ಲಿ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷರಾದ ಮೌಲಾನಾ ಎನ್.ಕೆ. ಮಹಮ್ಮದ್ ಶಾಫಿ ಸ–ಅದಿ, ಸದಸ್ಯರಾದ ಆರ್. ಅಬ್ದುಲ್ ರಿಯಾಜ್ ಖಾನ್‌ರವರು ನವೆಂಬರ್ 25 ರಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿ ಮಾಡಿ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗಳ ಅಭಿವೃದ್ಧಿ, ವಕ್ಫ್ ಆಸ್ತಿಗಳ ಸಂರಕ್ಷಣೆಗಳ ಪ್ರಗತಿಯನ್ನು ವಿವರಿಸಿದರು.

ರಾಜ್ಯದಲ್ಲಿ ಇನ್ನೂ ಸುಮಾರು ವಕ್ಫ್ ಸಂಸ್ಥೆಗಳ ಅಭಿವೃದ್ಧಿ ಮತ್ತು ಸಂರಕ್ಷಣೆಗಾಗಿ ಅಂದಾಜು ರೂ. 300.00 ಕೋಟಿಗೂ ಹೆಚ್ಚು ಅನುದಾನದ ಅವಶ್ಯಕತೆ ಇರುತ್ತದೆ ಎಂದು ವಕ್ಫ್ ಮಂಡಳಿಯ ಅಧ್ಯಕ್ಷರು ಕೋರಿದರು. ಅಧ್ಯಕ್ಷರ ಮಾತಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು ಸಮುದಾಯದ ಸರ್ವತೋಮುಖ ಅಭಿವೃದ್ಧಿ ಹಾಗೂ ವಕ್ಫ್ ಸಂಸ್ಥೆಗಳ ಅಭಿವೃದ್ಧಿ ಮತ್ತು ಸಂರಕ್ಷಣೆಗಳ ಮೇಲೆ ಮುತುವರ್ಜಿ ವಹಿಸುವಂತೆ ಸೂಚಿಸಿದರು.

ಅದೇ ರೀತಿಯಲ್ಲಿ ರಾಜ್ಯ ವಕ್ಫ್ ಮಂಡಳಿಗೆ ಸರ್ಕಾರದ ವತಿಯಿಂದ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಹಾಗೂ ಹೆಚ್ಚುವರಿ ಅನುದಾನ ಮಂಜೂರಾತಿಗೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಮುಖ್ಯಮಂತ್ರಿಗಳ ಭೇಟಿಯ ನಂತರ ಸಚಿವೆ ಶ್ರೀಮತಿ ಶಶಿಕಲಾ ಜೊಲ್ಲೆ ಅವರು ವಿಕಾಸಸೌಧದಲ್ಲಿ ವಕ್ಫ್ ಮತ್ತು ಹಜ್ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ವಕ್ಫ್ ಮತ್ತು ಹಜ್ ಇಲಾಖೆಯ ವತಿಯಿಂದ ಕೈಗೊಳ್ಳಬೇಕಾಗಿರುವ ಅಗತ್ಯ ಅಭಿವೃದ್ಧಿಪರ ಯೋಜನೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷರಾದ ಮೌಲಾನಾ ಎನ್.ಕೆ. ಮಹಮ್ಮದ್ ಶಾಫಿ ಸ–ಅದಿ, ರಾಜ್ಯ ಹಜ್ ಸಮಿತಿ ಅಧ್ಯಕ್ಷ ರೌಫುದ್ದೀನ್ ಕಚೇರಿವಾಲೆ, ವಕ್ಫ್ ಮಂಡಳಿ ಸದಸ್ಯರಾದ ಅಬ್ದುಲ್ ರಿಯಾಜ್ ಖಾನ್ ಆರ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಮೇಜರ್ ಮಣಿವಣ್ಣನ್ ಉಪಸ್ಥಿತರಿದ್ದರು.

## ಶಿಕ್ಷೆಯಾದಾಗ ಮಾತ್ರ ಭಯೋತ್ಪಾದನಾ ಪ್ರಕರಣಗಳು ಮರುಕಳಿಸುವುದಿಲ್ಲ : ಕಮಲ್ ಪಂತ್

ಬೆಂಗಳೂರು, ನವೆಂಬರ್ 26 (ಕರ್ನಾಟಕ ವಾರ್ತೆ):

ಭಯೋತ್ಪಾದನೆಯಂತಹ ಹಿಂಸಾತ್ಮಕ ಪ್ರಕರಣಗಳಲ್ಲಿ ಭಾಗಿಯಾದವರನ್ನು ಪತ್ತೆ ಹಚ್ಚಿ ಶಿಕ್ಷೆ ಕೊಡಿಸಿದಾಗ ಮಾತ್ರ, ಭಯೋತ್ಪಾದನಾ ಪ್ರಕರಣಗಳು ಸಮಾಜದಲ್ಲಿ ಮತ್ತೆ ಮರುಕಳಿಸುವುದಿಲ್ಲ ಎಂದು ಬೆಂಗಳೂರು ಪೊಲೀಸ್ ಆಯುಕ್ತ ಕಮಲ್ ಪಂತ್ ಅವರು ಇಲ್ಲಿ ಇಂದು ಅಭಿಪ್ರಾಯಪಟ್ಟರು.

ರಾಜ್ಯ ಸರ್ಕಾರದ ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಡಾ ಡಿ ವಿ ಗುರುಪ್ರಸಾದ್ ಅವರ 69 ನೇ ಪುಸ್ತಕ ಆಪರೇಷನ್ ತ್ರಿಶೂಲ : ಒಸಾಮಾ ಬಿನ್ ಲ್ಯಾಡೆನ್ ಪತ್ತೆ – ಹತ್ಯೆ ಪುಸ್ತಕವನ್ನು ನಗರದ ಕರ್ನಾಟಕ ಚಿತ್ರಕಲಾ ಪರಿಷತ್ ಸಭಾಂಗಣದಲ್ಲಿ ಬಿಡುಗಡೆ ಮಾಡಿ ಅವರು ಮಾತನಾಡುತ್ತಿದ್ದರು.

ಉತ್ತರ ಭಾರತದಲ್ಲಿ ಆತಂಕವಾದ ಎಂಭತ್ತರ ದಶಕದಲ್ಲಿತ್ತು. ಪಂಜಾಬ್, ದೆಹಲಿ ಹೀಗೆ ಅಲ್ಲಿನ ಪ್ರಮುಖ ಪ್ರದೇಶಗಳು ಭಯೋತ್ಪಾದಕರ ದಾಳಿಗೆ ಒಳಗಾದವು. ನಂತರ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದನಾ ಚಟುವಟಿಕೆಗಳು ಪ್ರಾರಂಭವಾದವು. ಕರ್ನಾಟಕದಲ್ಲಿಯೂ ಬೆರಳೆಣಿಕೆಯಷ್ಟು ಭಯೋತ್ಪಾದನಾ ಪ್ರಕರಣಗಳು ನಡೆದಿವೆ. ಆದರೆ, ಈ ಪ್ರಕರಣಗಳಲ್ಲಿ ಭಾಗಿಯಾದವರನ್ನು ಪತ್ತೆ ಹಚ್ಚಿ ಶಿಕ್ಷೆ ಕೊಡಿಸಿದ್ದು ಕರ್ನಾಟಕ ಪೊಲೀಸರ ದಾಖಲೆ ಎಂದು ಅವರು ಹೆಮ್ಮೆಯಿಂದ ಹೇಳಿದರು.

ಉನ್ನತ ಹುದ್ದೆಯ ಅಲಂಕರಿಸಿರುವ ಹಿನ್ನೆಲೆಯಲ್ಲಿ ಸಾಂಪ್ರದಾಯಿಕವಾಗಿ ಈ ಪುಸ್ತಕವನ್ನು ಬಿಡುಗಡೆ ಮಾಡಲು ತಾವು ಅರ್ಹರಾಗಿರಬಹುದು. ಆದರೆ, ಡಾ ಡಿ ವಿ ಗುರುಪ್ರಸಾದ್ ಅವರ ಮಾರ್ಗದರ್ಶನದಲ್ಲಿ ಖಾಯಂ ಪೂರ್ವ ಅವಧಿಯನ್ನು ಪೂರ್ಣಗೊಳಿಸಿದ ತಮಗೆ ಅವರೇ ನಿಜವಾದ ಗುರುಗಳು ಎಂದ ಕಮಲ್ ಪಂತ್ ಅವರು ತಮಗೆ ಪೊಲೀಸ್ ಇಲಾಖೆಯಲ್ಲಿ ಸಮರ್ಥವಾಗಿ ಕಾರ್ಯ ನಿರ್ವಹಿಸಿ ಗಟ್ಟಿಯಾಗಿ ನೆಲೆಯೂರಲು ಡಾ ಗುರುಪ್ರಸಾದ್ ಅವರೇ ಕಾರಣರು ಎಂದು ವಿನಮ್ರತೆಯ ಮಾತುಗಳನ್ನಾಡಿದರು.

ಡಾ ಡಿ ವಿ ಗುರುಪ್ರಸಾದ್ ಅವರ ಈ ಪುಸ್ತಕವು ಎಷ್ಟು ರೋಚಕವಾಗಿದೆ ಎಂದರೆ ಕನ್ನಡ ಸಿನಿಮಾ ನಿರ್ಮಿಸಲು ಮೂಲಾಧಾರ ಆಗುತ್ತದೆ ಎಂದು ಕಮಲ್ ಪಂತ್ ಅವರು ತಮ್ಮ ಅನಿಸಿಕೆಯನ್ನು ವ್ಯಕ್ತಪಡಿಸಿದರು.

ಹೆಸರಾಂತ ಶಿಕ್ಷಣ ತಜ್ಞ ಡಾ ಗುರುರಾಜ ತರಜಗಿ ಅವರು ಮಾತನಾಡಿ ಕಾಮದಿಂದ ಕಾಮ ಗೆಲ್ಲಲು ಸಾಧ್ಯವಿಲ್ಲ ಎಂಬ ಯಯಾತಿಯ ಮಾತು ಉಗ್ರವಾದಕ್ಕೂ ಅನ್ವಯಿಸುತ್ತದೆ. ಉಗ್ರವಾದದಿಂದ ಉಗ್ರವಾದವನ್ನು ಗೆಲ್ಲಲು ಸಾಧ್ಯವಿಲ್ಲ. ಭಯೊತ್ಪಾನೆಯಿಂದ ಭಯೋತ್ಪಾದನೆ ಗೆಲ್ಲಲು ಸಾಧ್ಯವಿಲ್ಲ. ಒಂದು ಕಾಲದಲ್ಲಿ ಅತ್ಯಂತ ಸಂವೇದನಾಶೀಲ ಹಾಗೂ ಆಗರ್ಭ ಶ್ರೀಮಂತ ಒಸಾಮಾ ಬಿನ್ ಲಾಡೆನ್ ನಂತರ ಅತೀ ಕ್ರೂರಿ ಆದ ಎಂಬುದು ನಂಬಲು ಬಲು ಕಷ್ಟ. ಅಶಾಂತಿ. ಆತಂಕವಾದ ಹೆಚ್ಚಿದಾಗ ಅಲ್ಲೋಲಕಲ್ಲೋಲವಾಗುತ್ತದೆ ನಿಜ. ಆದರೆ, ಶಾಂತಿಯಿಂದ ಮಾತ್ರ ನೆಮ್ಮದಿ ಸಾಧ್ಯ ಎಂದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಲೇಖಕ ಡಾ ಡಿ ವಿ ಗುರುಪ್ರಸಾದ್ ಅವರು ಮೈಸೂರು ಮೂಲದ ವಿದ್ಯಾವಂತ ಹುಡುಗನೊಬ್ಬ ಒಸಾಮಾ ಬಿನ್ ಲ್ಯಾಡೆನ್‌ನ ಬಲಗೈ ಭಂಟನಾದ ಎಂಬುದನ್ನು ಕೇಳಿದಾಗ ಭಯವಾಗುತ್ತದೆ. ಶಿಕ್ಷಣವು ವಿನಯವಂತಿಕೆಯನ್ನು ಕಲಿಸಿಕೊಡುವ ಬದಲು ಕ್ರೌರ್ಯವನ್ನು ಹುಟ್ಟು ಹಾಕಿದ್ದು ವಿಪರ್ಯಾಸ ಎಂದು ಹೇಳಿದರು.

ವಿಕ್ರಂ ಪ್ರಕಾಶನದ ವೆಬ್‌ಸೈಟ್ ಕೂಡಾ ಉದ್ಘಾಟಿಸಿದ ಈ ಕಾರ್ಯಕ್ರಮದಲ್ಲಿ ಕರ್ನಾಟಕ ಚಿತ್ರಕಲಾ ಪರಿಷತ್ ಉಪಾಧ್ಯಕ್ಷರಾದ ಟಿ. ಪ್ರಭಾಕರ್, ಪೊಲೀಸ್ ಅಧಿಕಾರಿ ಡಾ. ಭೀಮಾಶಂಕರ್ ಗುಳೇದ್, ನಿವೃತ್ತ ಪೊಲೀಸ್ ಅಧಿಕಾರಿಗಳಾದ ಜೀಜಾ ಹರಿಸಿಂಗ್, ಗೋಪಾಲ್ ಬಿ ಹೊಸೂರ್ ಅವರೂ ಒಳಗೊಂಡಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಪುಸ್ತಕದ ಮುಖ ಬೆಲೆ 200 ರೂ ಇದ್ದು, ಉದ್ಘಾಟನಾ ಸಮಾರಂಭದ ಪ್ರಯುಕ್ತ ಶೇಕಡಾ 25 ರಷ್ಟು ರಿಯಾಯಿತಿ ನೀಡಲಾಗಿತ್ತು.